**ಅಸಲು ದಾವೆ ಸಂಖ್ಯೆ.165/2016**

ಪಿ.ಡಬ್ಲ್ಯು:1

**ದಿನಾಂಕ:27-09-2022 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಪಾಟೀ ಸವಾಲುಃ 4 ರಿಂದ 7 ನೇ ಪ್ರತಿವಾದಿಗಳ ಪರ ಶ್ರೀ ಎಂ.ಎಸ್.ಹೆಚ್. ವಕೀಲರಿಂದಃ-</u>**

ನಾನು ಪಿಯುಸಿ ವರೆಗೆ ವಿದ್ಯಾಭ್ಯಾಸ ಮಾಡಿರುತ್ತೇನೆ. ನನ್ನ ತಂದೆಗೆ ಇಬ್ಬರು ಗಂಡು ಮಕ್ಕಳು ಇರುತ್ತಾರೆ ಹೆಣ್ಣು ಮಕ್ಕಳು ಇರುವುದಿಲ್ಲ. ದಾವಾ ಸ್ವತ್ತು ನನ್ನ ತಂದೆಯ ಆಸ್ತಿ ಎಂದರೆ ಸಾಕ್ಷಿಯು 4 ನೇ ತಲೆಮಾರಿನ ಆಸ್ತಿ ಎಂದು ನುಡಿಯುತ್ತಾರೆ. ನನ್ನ ತಂದೆಗೆ ಒಬ್ಬ ಅಣ್ಣ ನಂಜುಂಡಪ್ಪ ಇರುತ್ತಾರೆ ಮತ್ತು ಮೂರು ಜನ ಅಕ್ಕತಂಗಿಯರು ಇರುತ್ತಾರೆ. ನನ್ನ ತಂದೆಯ ಸಹೋದರ ಸಹೋದರಿಯರು ವಿಭಾಗ ಆಗಿರುವುದಿಲ್ಲ ಎಂದರೆ ಸರಿ. ಸದರಿಯವರಿಗೆ ದಾವಾ ಆಸ್ತಿಯಲ್ಲಿ ಬಾಗಾಂಶ ಇರುತ್ತದೆ ಎಂದರೆ ಸರಿ. ನನ್ನ ತಂದೆಯ ಸಹೋದರ ಸಹೋದರಿಯರನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ. **(ಈ ದಾವೆಯನ್ನು ವಾದಿಯು ಭಾಗಾಂಶ ವನ್ನು ಕೋರಿ ಸಲ್ಲಿಸಿರುತ್ತಾರೆ. ವಾದಿಯ ತಂದೆಯ ಸಹೋದರ ಮತ್ತು ಸಹೋದರಿಯರು ಅವಶ್ಯಕ ಪಕ್ಷಗಾರರಾಗಿರುತ್ತಾರೆ ಎಂದು ಕಂಡುಬಂದಿರುತ್ತದೆ, ಆದ್ದರಿಂದ ಸದರಿಯವರನ್ನು ಪಕ್ಷಗಾರರನ್ನಾಗಿ ಮಾಡಲು ಸೂಚಿಸಲಾಗಿದೆ)**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

Sd/-
ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.